ಜವಾಬ್ದಾರಿ ಇರುವುದಿಲ್ಲ ಈ ಕಾರ್ಯಕ್ರಮದ ಉಸ್ತುವಾರಿಯನ್ನು ಎಸ್ ಡಿ ಎಂ ಸಿ ಅಧ್ಯಕ್ಷರು ಮತ್ತು ಮುಖ್ಯ ಅಡುಗೆಯವರು ನಿರ್ವಹಿಸುತ್ತಿರುವುದರಿಂದ ಬೇರೆ ಮೇಲ್ವಿಚಾರಕರ ನೇಮಕದ ಪ್ರಶ್ನೆ ಉದ್ಭವಿಸುವುದಿಲ್ಲ

547(855) ಶ್ರೀ ಸಿದ್ದು ಸಾವದಿ (ಜಮಖಂಡಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ 1 4 2004 ರಿಂದ ಇಲ್ಲಿಯವರೆಗೆ ಶಿಕ್ಷಣ ಇಲಾಖೆಗಳಲ್ಲಿ ಮಕ್ಕಳ ಮೇಲಾದ ಲೈಂಗಿಕ ದೌರ್ಜನ್ಯಗಳೆಷ್ಟು, ಎಷ್ಟು ವಯಸ್ಸಿನ ಮಕ್ಕಳ ಮೇಲಾಗಿದೆ, ಎಷ್ಟು ಕೇಸುಗಳನ್ನು ದಾಖಲಿಸಲಾಗಿದೆ,

ಆ) ಶಾಲಾ ಮಕ್ಕಳ ಮೇಲಾಗಿರುವ ಲೈಂಗಿಕ ದೌಜನ್ಯಗಳನ್ನು ತಡೆಯಲು ಕೈಗೊಂಡ ಕಾನೂನಾತ್ಮಕ ಕ್ರಮಗಳೇನು, ಎಷ್ಟು ಅಪರಾಧಿಗಳನ್ನು ಇಲ್ಲಿಯವರೆಗೆ ವಜಾಗೊಳಿಸಲಾಗಿದೆ, ಎಷ್ಟು ಜನರಿಗೆ ಶಿಕ್ಷೆ ವಿಧಿಸಲಾಗಿದೆ,

ಇ) ದೌರ್ಜನ್ಯ ನಡೆಯದಂತೆ ಮುಂಜಾಗ್ರತಾ ಕ್ರಮಗಳನ್ನೇನಾದರೂ ತೆಗೆದುಕೊಳ್ಳಲಾಗಿದೆಯೇ, ತೆಗೆದುಕೊಂಡಿದ್ದರೆ, ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ,

ಈ) ಈ ರೀತಿ ದೌರ್ಜನ್ಯಗಳನ್ನು ತಡೆಯಲು ಹೆಣ್ಣು ಮಕ್ಕಳ ಶಿಕ್ಷಣ ಸಂಸ್ಥೆಗಳಿಗೆ ಶಿಕ್ಷಕಿಯರನ್ನೇ ನೇಮಿಸಲು ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ, ಇಲ್ಲವಾದಲ್ಲಿ, ಕಾರಣಗಳೇನು, ಕೈಗೊಂಡಿದ್ದರೆ, ಅಂತಹ ಸಂಸ್ಥೆಗಳೆಷ್ಟು ಯಾವುವು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿನ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ಮಕ್ಕಳ ಮೇಲೆ 2004 ರಿಂದ 2006ರ ವರೆಗೆ 32 ಲೈಂಗಿಕ ಪ್ರಕರಣಗಳನ್ನು ಗುರ್ತಿಸಲಾಗಿದೆ

ಆ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ವಿರುದ್ಧ ಇಲಾಖೆಯು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುತ್ತಿದೆ

* ಕ್ರಿಮಿನಲ್ ಮೊಕದ್ದಮೆ ಹೂಡಿ ವಿಚಾರಣೆ ಕೈಗೊಳ್ಳುವುದು
* ವಿಚಾರಣೆ ಕಾಯ್ದಿರಿಸಿ ಅಮಾನತ್ತುಗೊಳಿಸುವುದು
* ವಿಚಾರಣೆ ಪೂರ್ಣಗೊಳ್ಳುವವರೆಗೆ ಅಮಾನತ್ತನ್ನು ಮುಂದುವರೆಸುವುದು
* ವಿಚಾರಣೆಯಲ್ಲಿ ಆರೋಪ ಸಾಬೀತಾದಲ್ಲಿ ಅಂತಹ ಶಿಕ್ಷಕರಿಗೆ ಕಠಿಣ ಶಿಕ್ಷೆ ವಿಧಿಸುವುದು ಇದರ ಜೊತೆಗೆ ಶಾಲೆಗಳಲ್ಲಿ ಲೈಂಗಿಕ ದೌರ್ಜನ್ಯ ನಡೆಯದಂತೆ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಲು ಇಲಾಖೆಯಿಂದ ದಿ 13 7 2006ರಲ್ಲಿ ರಾಜ್ಯದ ಎಲ್ಲಾ ಉಪ ನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸುತ್ತೋಲೆಯನ್ನು ಕಳುಹಿಸಲಾಗಿದೆ
* ಆಪಾದಿತ ಶಿಕ್ಷಕರ ಮೇಲಿನ ಆರೋಪವು ನಿರ್ದಿಷ್ಟವಾಗಿ ಸಾಬೀತಾಗಿಲ್ಲದಿರುವುದರಿಂದ ಇಲ್ಲಿಯವರೆಗೆ ಯಾರನ್ನು ವಜಾ ಮಾಡಿರುವುದಿಲ್ಲ
* ಇಬ್ಬರಿಗೆ ಶಿಕ್ಷೆ ವಿಧಿಸಲಾಗಿದೆ

1) ಒಬ್ಬ ಶಿಕ್ಷಕರಿಗೆ ಸಂಚಿತವಾಗಿ ಒಂದು ವಾರ್ಷಿಕ ವೇತನ ಬಡ್ತಿಯನ್ನು ಕಡಿತಗೊಳಿಸಲಾಗಿದೆ

2) ಮತ್ತೊಬ್ಬ ಶಿಕ್ಷಕರಿಗೆ ಐದು ವಾರ್ಷಿಕ ವೇತನ ಬಡ್ತಿಯನ್ನು ಕಡಿತಗೊಳಿಸಲಾಗಿದೆ

ಇ) ಸರ್ಕಾರವು ಗ್ರಾಮ ಪಂಚಾಯತಿಗಳ (ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳ) (ಮಾದರಿ) ಉಪವಿಧಗಳು 2006ನ್ನು ರಚಿಸಿ, ಅಧಿಸೂಚನೆ ಹೊರಡಿಸಲಾಗಿದೆ ಈ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯಲ್ಲಿನ ನಾಗರೀಕ ಸೌಲಭ್ಯ ಸಮಿತಿಯು ಶಾಲೆಯಲ್ಲಿ ಮಕ್ಕಳಿಗೆ ದೈಹಿಕ ಅಥವಾ ಲೈಂಗಿಕ ಕಿರುಕುಳ ತಡೆಗಟ್ಟಲು ತೆಗೆದುಕೊಳ್ಳುವ ಕ್ರಮದ ಬಗ್ಗೆ

ವಿವರಿಸಲಾಗಿದೆ ಇದರ ಜೊತೆಗೆ ಶಾಲೆಗಳಲ್ಲಿ ಲೈಂಗಿಕ ದೌರ್ಜನ್ಯ ನಡೆಯದಂತೆ ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಲು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ದಿ 13 7 2006ರಲ್ಲಿ ರಾಜ್ಯದ ಎಲ್ಲಾ ಉಪ ನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸುತ್ತೋಲೆಯನ್ನು ಕಳುಹಿಸಲಾಗಿದೆ

ಈ) ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಶೇ 50ರಷ್ಟು ಹುದ್ದೆಗಳನ್ನು ಮಹಿಳಾ ಅಭ್ಯರ್ಥಿಗಳಿಗೆ ಕಾಯ್ದಿರಿಸಲಾಗಿದೆ ಆದಷ್ಟು ಹೆಣ್ಣುಮಕ್ಕಳ ಶಾಲೆಗಳಿಗೆ ಶಿಕ್ಷಕಿಯರನ್ನೇ ನೇಮಕಾತಿ ಮಾಡಲು ಕ್ರಮವಹಿಸಲಾಗುತ್ತಿದೆ

548(856) ಶ್ರೀ ಸಿದ್ದುಸಾವದಿ (ಜಮಖಂಡಿ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಜಮಖಂಡಿ ತಾಲ್ಲೂಕಿನಲ್ಲಿ ಎಷ್ಟು ಪದವಿ ಪೂರ್ವ ಕಾಲೇಜುಗಳಿವೆ, ಅಲ್ಲಿ ಯಾವ ಯಾವ ವಿಷಯ ಬೋಧನೆಯನ್ನು ಮಾಡಲಾಗುವುದು, (ಸಂಪೂರ್ಣ ವಿವರ ಒದಗಿಸುವುದು)

ಆ) ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳನ್ನು ಎಲ್ಲಾ ಕಾಲೇಜುಗಳಲ್ಲಿ ಪ್ರಾರಂಭಿಸಲು ಇರುವ ತೊಂದರೆಗಳೇನು, ಗ್ರಾಮೀಣ ಮಕ್ಕಳು ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಅಧ್ಯಯನ ಮಾಡಲು ಈ ವಿಭಾಗಗಳನ್ನು ಯಾವಾಗ ಪ್ರಾರಂಭಿಸಲಾಗುವುದು,

ಇ) ತಾಲ್ಲೂಕಿನಲ್ಲಿ ಎಷ್ಟು ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿವೆ, ಉಳಿದವುಗಳಿಗೆ ಯಾವಾಗ ಕಟ್ಟಡಗಳನ್ನು ಒದಗಿಸಲಾಗುವುದು,

ಈ) ಪ್ರೌಢಶಾಲೆ ಮತ್ತು ಕಾಲೇಜುಗಳಿಗೆ ಶಿಕ್ಷಕರ ಕೊರತೆ ಇದ್ದು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಜಮಖಂಡಿ ತಾಲ್ಲೂಕಿನಲ್ಲಿ ಒಟ್ಟು 17 ಪದವಿ ಪೂರ್ವ ಕಾಲೇಜುಗಳಿವೆ ಇವುಗಳಲ್ಲಿ 07 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು, 07 ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳು ಮತ್ತು 03 ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳು ಇರುತ್ತವೆ ಇಲ್ಲಿ ಕಲಾ,